**ಸಿ.ಸಿ.ನಂಬರ್‌ಃ 57/2023**

ಪಿಡಬ್ಲ್ಯೂಃ1

ಇಂದು ದಿನಾಂಕಃ 06.03.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ** ಮಾನ್ಯ ಎಪಿಪಿಯವರಿಂದಃ

ಸಾಕ್ಷಿಗೆ ನ್ಯಾಯಾಲಯದ ಮುಂದೆ ಹಾಜರಪಡಿಸಿರುವಂತಹ ಒಂದು ಕೋಲು ಹಾಗೂ ಕಂದ್ಲಿಯನ್ನು ಸಾಕ್ಷಿ ನೋಡಿ ಅವುಗಳನ್ನು ಗುರುತಿಸಲು ವಿಫಲರಾಗಿರುತ್ತಾರೆ. ನಾನು ಯಾವುದೇ ಮರುಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಅಭಿಯೋಜನೆಗೆ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ** ಮಾನ್ಯ ಎಪಿಪಿಯವರಿಂದಃ

ನ್ಯಾಯಾಲಯದ ಮುಂದೆ ಹಾಜರಪಡಿಸಿರುವಂತಹ ವಸ್ತುಗಳಿಂದ ಆರೋಪಿತರು ಹಲ್ಲೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಮರುಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಮರುಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ** ಆರೋಪಿ ಪರ ಶ್ರೀ ಎಸ್ ಎನ್ ವಿ ವಕೀಲರಿಂದಃ

ಆರೋಪಿತರು 3 ವರ್ಷಗಳ ಹಿಂದೆ ನಮ್ಮ ಹೊಲದಲ್ಲಿ ಯಾವುದೇ ದನಕರುಗಳನ್ನು ಬಿಟ್ಟಿಲ್ಲ ಎಂದರೆ ಸರಿ. ಆರೋಪಿತರು ನನಗೆ ಮತ್ತು ಚಾಸಾ-4 ವರರಿಗೆ ಅವಾಚ್ಯ ಶಬ್ದಗಳಿಂದೆ ಬೈಯ್ದಿಲ್ಲ ಎಂದರೆ ಸರಿ. 3 ನೇ ಆರೋಪಿ ನನಗೆ ಲಾಂಗ್ ನಿಂದ ನನ್ನ ತಲೆಗೆ ಹೊಡೆದಿಲ್ಲ ಎಂದರೆ ಸರಿ. ಅದೇ ರೀತಿ ಆರೋಪಿತರು ನನಗೆ ಕಲ್ಲಿನಿಂದ ಹೊಡೆದಿಲ್ಲ ಎಂದರೆ ಸರಿ. ನಾನು ಹೇಳುವಂತೆ ಯಾವುದೇ ಗಾಯಗಳು ಆಗಿಲ್ಲ ಎಂದರೆ ಸರಿ. ಹಾಗೂ ಅವುಗಳಲ್ಲಿ ನಾನು ಯಾವುದೇ ಚಿಕಿತ್ಸೆಯನ್ನು ಪಡೆದುಕೊಂಡಿಲ್ಲ ಎಂದರೆ ಸರಿ. ನಿಪಿ-1 ರಲ್ಲಿ ಬರೆದಿರುವ ಅಂಶಗಳ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿ. ನಾನು ಪೋಲಿಸರ ಮಾತು ಕೇಳಿ ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿ. ನಿಪಿ-2 ಪಂಚನಾಮೆಗೆ ಪೋಲಿಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ. ಸದರಿ ದಾಖಲೆಗಳ ಬರೆದಿರುವ ಅಂಶಗಳ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿ. ಆರೋಪಿತರು ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವಂತೆ ಯಾವುದೇ ಕೃತ್ಯವನ್ನು ಎಸಗಿಲ್ಲ ಎಂದರೆ ಸರಿ.

**ಮರು ವಿಚಾರಣೆಃ** ಮಾನ್ಯ ಎಪಿಪಿ ಯವರಿಂದಃ

ನಾನು ಚಾಸಾ-4 ಮತ್ತು ಆರೋಪಿತರು ರಾಜಿಯಾಗಿರುತ್ತೇವೆ ಎಂದರೆ ಸರಿ. ಆ ಕಾರಣದಿಂದ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಪ್ರಧಾನ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.

## <u>ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ., ನ್ಯಾಯಾಲಯ.</u>
## <u>ಹಿರೇಕೆರೂರು.</u>
## <u>ಸಿ.ಸಿ.ನಂಬರ್‌ಃ 57/2023</u>

ಸಿಡಬ್ಲ್ಯೂಃ 4

ಪಿಡಬ್ಲ್ಯೂಃ 2

| | | |
|---|---|---|
| ಸಾಕ್ಷಿಯ ಹೆಸರು | : | ಜಾಪರ್ ಸಾದೀಕ |
| ತಂದೆಯ ಹೆಸರು | : | ಮಖಬೂಲ ಸಾಬ ಶಿಡೇನೂರು |
| ವಯಸ್ಸು | : | 31 ವರ್ಷ |
| ಉದ್ಯೋಗ | : | ಚಾಲಕ |
| ವಾಸಸ್ಥಳ | : | ಚಿಕ್ಕೇರೂರ |

ಇಂದು ದಿನಾಂಕಃ 06.03.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

<u>**ಮುಖ್ಯ ವಿಚಾರಣೆಃ**</u> ಮಾನ್ಯ ಎಪಿಪಿಯವರಿಂದಃ

ಚಾಸಾ–1 ನನ್ನ ಅಣ್ಣ. ಚಾಸಾ–2 ಮತ್ತು 3 ರವರ ಪರಿಚಯ ನನಗೆ ಇರುತ್ತದೆ. ಆರೋಪಿತರ ಪರಿಚಯ ನನಗೆ ಇರುತ್ತದೆ. ನನ್ನ ಮತ್ತು ಚಾಸಾ–1 ಹಾಗೂ ಆರೋಪಿತರ ನಡುವೆ ಯಾವುದೇ ಗಲಾಟೆ ನಡೆದಿರುವುದಿಲ್ಲ, ಆರೋಪಿತರು ನನ್ನನ್ನು ಹಾಗೂ ಚಾಸಾ–1 ರವರಿಗೆ ಉದ್ದೇಶಿಸಿ ಅವಾಚ್ಯ ಶಬ್ದಗಳಿಂದ ಬೈಯ್ದು ಜೀವ ಬೆದರಿಕೆ ಹಾಕಿರುವುದಿಲ್ಲ. ಆರೋಪಿತರು ನಮ್ಮ ಮೇಲೆ ಯಾವುದೇ ವಸ್ತುವನ್ನು ಬಳಸಿ ನಮ್ಮ ಹಲ್ಲೆ ಮಾಡಿರುವುದಿಲ್ಲ. ನಾವು ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದುಕೊಂಡಿರುವುದಿಲ್ಲ. ಈ ಬಗ್ಗೆ ಪೋಲಿಸರು ನನ್ನ ವಿಚಾರಣೆ ಮಾಡಿರುವುದಿಲ್ಲ ಹಾಗೂ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಅಭಿಯೋಜನೆಗೆ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

<u>**ಪಾಟೀ ಸವಾಲುಃ**</u> ಮಾನ್ಯ ಎಪಿಪಿಯವರಿಂದಃ

ದಿನಾಂಕ 23–02–2022 ರಂದು ಸಂಜೆ 5.30 ಗಂಟೆಯ ಸುಮಾರಿಗೆ ನಾನು ಮತ್ತು ಚಾಸಾ–1 ರವರು ನಮ್ಮ ಹೊಲಕ್ಕೆ ನೀರು ಬಿಡುತ್ತಿರುವಾಗ 1 ನೇ ಆರೋಪಿ ತನ್ನ ಎಮ್ಮೆಯನ್ನು ನಮ್ಮ ಅಡಿಕೆ ತೋಟದಲ್ಲಿ ಬಿಟ್ಟಿದ್ದರು ಎಂದರೆ ಸರಿಯಲ್ಲ. ಆ ಬಗ್ಗೆ ಪ್ರಶ್ನಿಸಿದಾಗ ಆರೋಪಿ ನಮ್ಮ ಉದ್ದೇಶಿಸಿ ಅವಾಚ್ಯ ಶಬ್ದಗಳಿಂದ ಬೈಯ್ದಿದ್ದುತ್ತಾರೆ ಎಂದರೆ ಸರಿಯಲ್ಲ. ನಂತರ ಆರೋಪಿತರು ನಮ್ಮನ್ನು ಕೈಯಿಂದ ದೂಡಾಡಿ, ಒಂದು ಬಡಿಗೆ ಹಾಗೂ ಕಂದ್ಲಿಯಿಂ ಹೊಡೆದಿರುತ್ತಾರೆ ಎಂದರೆ

ಸರಿಯಲ್ಲ. ಆ ಪರಿಣಾಮ ನನಗೆ ಮತ್ತು ಚಾಸಾ-4 ರವರಿಗೆ ಗಾಯಗಳಾಗಿರುತ್ತವೆ ಎಂದರೆ ಸರಿಯಲ್ಲ. ನಂತರ ನಾವು ಆಸ್ಪತ್ರೆಯಲ್ಲಿ ಚಿಕಿತ್ಸೆಯನಲ್ಲು ಪಡೆದುಕೊಂಡಿರುತ್ತೇವೆ ಎಂದರೆ ಸರಿಯಲ್ಲ. ನಂತರ ಚಾಸಾ-5 ಮತ್ತು 6 ರವರು ಜಗಳವನ್ನು ಬಿಡಿಸಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ಚಾಸಾ-1 ರವರು ದೂರನ್ನು ನೀಡಿರುತ್ತಾರೆ ಎಂದರೆ ಸರಿಯಲ್ಲ. ಆ ಬಗ್ಗೆ ದಿನಾಂಕ 27-02-2022 ರಂದು ನಾನು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನುನ ನಿಪಿ-4 ಎಂದು ಗುರುತಿಸಲಾಯಿತು. ಆರೋಪಿತರು, ನಾನು ಚಾಸಾ-1 ರಾಜಿಯಾಗಿರುತೆತೇವೆ ಎಂದರೆ ಸರಿ. ಆ ಕಾರಣದಿಂದ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ಶ್ರೀ ಎಸ್ ಎನ್ ವಿ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.

ಮರು ವಿಚಾರಣೆಃ ಇಲ್ಲ
(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಪ್ರಧಾನ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.